**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನವಾದ ಡಿಸೆಂಬರ್ 29ರಂದು ಪ್ರತಿ ವರ್ಷ "ವಿಶ್ವಮಾನವ ದಿನಾಚರಣೆ" ಯನ್ನಾಗಿ ಆಚರಿಸುವ ಬಗ್ಗೆ.

\- - - - -

**ಓದಲಾಗಿದೆ:**

ಸರ್ಕಾರದ ಕಾರ್ಯದರ್ಶಿಗಳು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ಇವರ ದಿನಾಂಕ: 23ನೇ ಡಿಸೆಂಬರ್ 2015ರ ಅರೆ ಸರ್ಕಾರಿ ಪತ್ರ.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಕಾರ್ಯದರ್ಶಿಗಳು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ಇವರ ಅರೆ ಸರ್ಕಾರಿ ಪತ್ರದಲ್ಲಿ ಕರ್ನಾಟಕ ಸರ್ಕಾರವು ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನವನ್ನು ಪ್ರತಿ ವರ್ಷ ಡಿಸೆಂಬರ್ 29ರಂದು "ವಿಶ್ವಮಾನವ ದಿನಾಚರಣೆ" ಯನ್ನಾಗಿ ಆಚರಿಸಲು ಸರ್ಕಾರವು ನಿರ್ಧರಿಸಿರುವುದರಿಂದ ಎಲ್ಲಾ ಶಾಲಾ ಕಾಲೇಜುಗಳಲ್ಲಿಯೂ ಕುವೆಂಪುರವರ ವಿಶ್ವಮಾನವ ಸಂದೇಶ ಕುರಿತಂತೆ ವಿಚಾರಣಾ ಗೋಷ್ಠಿಯನ್ನು ಏರ್ಪಡಿಸುವುದರ ಮುಖಾಂತರ ದಿನಾಂಕ: 29-12-2015ರಂದು "ವಿಶ್ವಮಾನವ ದಿನಾಚರಣೆ" ಯನ್ನು ಆಚರಿಸಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಕೋರಿರುತ್ತಾರೆ.

ಅದರಂತೆ ಪರಿಶೀಲಿಸಿ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು, ಕಾಲೇಜು ಶಿಕ್ಷಣ / ತಾಂತ್ರಿಕ ಶಿಕ್ಷಣ ಇಲಾಖೆಯ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಕಾಲೇಜುಗಳು / ಇಂಜಿನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನವಾದ ಡಿಸೆಂಬರ್ 29ರಂದು ಪ್ರತಿ ವರ್ಷ "ವಿಶ್ವಮಾನವ ದಿನಾಚರಣೆ" ಯನ್ನು ಕಡ್ಡಾಯವಾಗಿ ಆಚರಿಸಲು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 262 ಯುಜಿಹೆಚ್ 2015 ಬೆಂಗಳೂರು, ದಿನಾಂಕ:28ನೇ ಡಿಸೆಂಬರ್ 2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು, ಕಾಲೇಜು ಶಿಕ್ಷಣ / ತಾಂತ್ರಿಕ ಶಿಕ್ಷಣ ಇಲಾಖೆಯ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಕಾಲೇಜುಗಳು / ಇಂಜಿನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಪ್ರತಿ ವರ್ಷ ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನವಾದ ಡಿಸೆಂಬರ್ 29ರಂದು "ವಿಶ್ವಮಾನವ ದಿನಾಚರಣೆ" ಯನ್ನು ತಪ್ಪದೇ ಕಡ್ಡಾಯವಾಗಿ ಆಚರಿಸಲು ಸರ್ಕಾರ ಆದೇಶಿಸಿದೆ.

29/12

Est

Dir-2203

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಸೋಮಶೇಖರ್)
ಸರ್ಕಾರದ ಉಪ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ).

**ಗೆ:**

1) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು.
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
6) ಎಲ್ಲಾ ಜಂಟಿ ನಿರ್ದೇಶಕರುಗಳು, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಬೆಂಗಳೂರು / ಮೈಸೂರು / ಮಂಗಳೂರು / ಶಿವಮೊಗ್ಗ / ಧಾರವಾಡ / ಕಲಬುರಗಿ(ಕಾಲೇಜು ಶಿಕ್ಷಣ ಆಯುಕ್ತರ ಮುಖಾಂತರ)
7) ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳು / ಇಂಜಿನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್ ಕಾಲೇಜುಗಳು(ಕಾಲೇಜು ಶಿಕ್ಷಣ ಆಯುಕ್ತರು / ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)

8) ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು(ಪದವಿ ಪೂರ್ವ ಶಿಕ್ಷಣ ನಿರ್ದೇಶಕರ ಮುಖಾಂತರ)

**<u>ಪ್ರತಿ:</u>**

1) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5) ಸರ್ಕಾರದ ಕಾರ್ಯದರ್ಶಿಗಳು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, ೧೮ನೇ ಅಡ್ಡರಸ್ತೆ,**
**ಮಲ್ಲೇಶ್ವರ, ಬೆಂಗಳೂರು-೧೨**

ಸಂಖ್ಯೆ:ಪಪೂಶಿ/ಶೈಶಾ/ಇತರೆ-೦೫/೨೦೧೫-೧೬ ದಿನಾಂಕ:೨೯/೧೨/೨೦೧೫

ಸರ್ಕಾರದ ನಡವಳಿ ಸಂಖ್ಯೆ:ಇಡಿ ೨೬೨ ಯುಜಿಹೆಚ್ ೨೦೧೫ ದಿನಾಂಕ:೨೮/೧೨/೨೦೧೫ರನ್ವಯ ದಿನಾಂಕ:೨೯/೧೨/೨೦೧೫ರಂದು **"ವಿಶ್ವಮಾನವ ದಿನಾಚಾರಣೆಯಾನ್ನು"** ಆಚರಿಸುವಂತೆ ಕ್ರಮ ವಹಿಸಲು ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಶೈಕ್ಷಣಿಕ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:
ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ.

ಪ್ರತಿ ಮಾಹಿತಿಗಾಗಿ:
ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ.